ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರೈತರು ಮತ್ತು ಕೃಷಿ ಕಾರ್ಮಿಕರಿಗೆ ನೀಡುತ್ತಿರುವ ಪರಿಹಾರಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

279 (458) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರು ಕೃಷಿ ಕಾರ್ಮಿಕರು ಹೊಲಗಳಲ್ಲಿ ಕಾರ್ಯನಿರ್ವಹಿಸುವ ಸಂದರ್ಭಗಳಲ್ಲಿ ನೈಸರ್ಗಿಕ ವಿಕೋಪಗಳಿಂದ ಅಥವಾ ಮಾನವನ ಹಸ್ತಕ್ಷೇಪವಿಲ್ಲದ ಅಪಘಾತ/ಅನಾಹುತಗಳಿಂದ ಮರಣಹೊಂದಿದ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮತ್ತು ಪ್ರಕರಣವಾರು ವಿವರ ನೀಡುವುದು)

(ಆ) ಬೆಳೆ ನಷ್ಟ ಉಂಟಾದಲ್ಲಿ ಬೆಳೆ ಪರಿಹಾರಕ್ಕೆ ವಿಮೆ ಯೋಜನೆ ಇದ್ದು, ಇದೇ ರೀತಿ ರೈತರು ಕೃಷಿ ಕಾರ್ಮಿಕರು ಹೊಲಗಳಲ್ಲಿ ಅಪಘಾತಕ್ಕೀಡಾದಾಗ ಅಥವಾ ಮರಣ ಹೊಂದಿದಾಗ ಸರ್ಕಾರ ಕೈಗೊಳ್ಳುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಇಂತಹ ರೈತರು/ಕೃಷಿ ಕಾರ್ಮಿಕರಿಗೆ ಪರಿಹಾರ ನೀಡಲು ಯಾವುದಾದರೂ ಯೋಜನೆಗಳನ್ನು ರೂಪಿಸಲಾಗಿದೆಯೇ ; ಹಾಗಿದ್ದಲ್ಲಿ, ಇಲ್ಲಿಯವರೆಗೆ ಯಾವ ಯೋಜನೆಗಳಡಿ ಎಷ್ಟು ಪ್ರಮಾಣದ ಪರಿಹಾರ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)